ಈ) ಸರ್ಕಾರಿ ಪೂರ್ವ ಪ್ರಾಥಮಿಕ ಶಾಲೆಗಳಲ್ಲಿ 1999-2000ನೇ ಸಾಲಿನಿಂದ ಮಕ್ಕಳ ದಾಖಲಾತಿಯನ್ನು ನಿಲ್ಲಿಸಿರುವುದರಿಂದ, ಪೂರ್ವ ಪ್ರಾಥಮಿಕ ಶಿಕ್ಷಣವನ್ನು ಪಡೆದಿರುವ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುವುದಿಲ್ಲ.

ಸರ್ಕಾರಿ ಪ್ರಾಥಮಿಕ, ಪ್ರೌಢ ಶಿಕ್ಷಣ ಶಾಲೆಗಳಲ್ಲಿ ಕಲಾ ಶಿಕ್ಷಕರ ನೇಮಕಾತಿ

1952 (2359) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಶಾಲೆಗಳಲ್ಲಿ ಕಲಾ ಶಿಕ್ಷಕರನ್ನು ಕೊನೆಯದಾಗಿ ಎಂದು ನೇಮಕಾತಿ ಮಾಡಿಕೊಳ್ಳಲಾಯಿತು;

ಆ) ಪ್ರಸ್ತುತ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಶಾಲೆಗಳಲ್ಲಿ ಎಷ್ಟು ಕಲಾ ಶಿಕ್ಷಕರ ಹುದ್ದೆಗಳು ಖಾಲಿ ಇವೆ;

ಇ) ಈ ಹುದ್ದೆಗಳನ್ನು ಎಂದು ನೇಮಕ ಮಾಡಿಕೊಳ್ಳಲಾಗುವುದು;

ಈ) ಈ ಬಾರಿಯ ನೇಮಕಾತಿಯಲ್ಲಿ ಎಷ್ಟು ಜನ ಕಲಾ ಶಿಕ್ಷಕರನ್ನು ನೇಮಿಸಿಕೊಳ್ಳಲಾಗುವುದು?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಲಾ ಶಿಕ್ಷಕರ ಹುದ್ದೆಗಳು ಇರುವುದಿಲ್ಲ. ಪ್ರೌಢ ಶಾಲೆಗಳಲ್ಲಿ ಕಲಾ ಶಿಕ್ಷಕರ ಹುದ್ದೆಗಳು ಇರುತ್ತದೆ. 1997-98ನೇ ಸಾಲಿನಲ್ಲಿ ನೇಮಕಾತಿ ಮಾಡಲಾಯಿತು.

ಆ) 548.

ಇ) ಶೇಕಡ 50 ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ಸದ್ಯದಲ್ಲೇ ನೇಮಕಾತಿ ಮಾಡಲಾಗುವುದು. ಉಳಿದ ಶೇಕಡ 50 ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಮುಂದಿನ ನೇಮಕಾತಿ ಸಮಯದಲ್ಲಿ ಮಾಡಿಕೊಳ್ಳಲಾಗುವುದು.

ಈ) 274 ಕಲಾ ಶಿಕ್ಷಕರನ್ನು ಪ್ರಾಥಮಿಕ ಶಾಲಾ ಶಿಕ್ಷಕರಿಂದ ಬಡ್ತಿ ಮೂಲಕ ಹಾಗೂ ಉಳಿದ 274 ಕಲಾ ಶಿಕ್ಷಕರನ್ನು ನೇರ ನೇಮಕಾತಿ ಮೂಲಕ ನೇಮಿಸಿಕೊಳ್ಳಲಾಗುವುದು.

ದೊಡ್ಡಬಳ್ಳಾಪುರ ಕ್ಷೇತ್ರದಲ್ಲಿ ಸರ್ಕಾರಿ ಶಾಲಾ ಕಟ್ಟಡಗಳ ದುರಸ್ತಿ

1954 (2599) ಶ್ರೀ ವಿ.ಕೃಷ್ಣಪ್ಪ (ದೊಡ್ಡಬಳ್ಳಾಪುರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ 1999-2000ನೇ ಸಾಲಿನಲ್ಲಿ ಸರ್ಕಾರಿ ಶಾಲಾ ಕಟ್ಟಡಗಳ ದುರಸ್ತಿ ಬಗ್ಗೆ ಕೈಗೊಂಡ ಕ್ರಮಗಳು ಯಾವುವು; (ವಿವರ ನೀಡುವುದು)

ಆ) ಇದಕ್ಕಾಗಿ ಇಲ್ಲಿಯವರೆಗೆ ಖರ್ಚು ಮಾಡಿದ ಹಣವೆಷ್ಟು;